**JULY 11, 2025**

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಕೇಂದ್ರೀಕೃತ ಕಾರ್ಯತಂತ್ರ ಹಾಗೂ ಸ್ಪಷ್ಟವಾದ ಮಾರ್ಗಸೂಚಿಗಳ ಮೂಲಕ, 6 –ಜಿ ತಂತ್ರಜ್ಞಾನದಲ್ಲಿ ನಾವೀನ್ಯತೆ ಸಾಧಿಸಲು ಹಾಗೂ ಸಕಾಲಿಕ ಸ್ಪೆಕ್ಟ್ರಮ್ ಹಂಚಿಕೆ ಮೂಲಕ ಪರಿವರ್ತನೆ ಸಕ್ರಿಯಗೊಳಿಸಲು, ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಸಂವಹನ ಇಲಾಖೆ, ಈಶಾನ್ಯ ಪ್ರದೇಶ ಅಭಿವೃದ್ಧಿ ಖಾತೆ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹೇಳಿದ್ದಾರೆ. ಬೆಂಗಳೂರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸಮೀಪ, ಖಾಸಗಿ ಹೊಟೇಲ್ ನಲ್ಲಿ, 6– ಜಿ ಮೈತ್ರಿಕೂಟದ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಾಗತಿಕವಾಗಿ 6 –ಜಿ ತಂತ್ರಜ್ಞಾನದಲ್ಲಿ ಶೇಕಡ 10 ರಷ್ಟು, ಬೌದ್ಧಿಕ ಆಸ್ತಿ ಹಕ್ಕು ಸಾಧಿಸುವ ನಿಟ್ಟಿನಲ್ಲಿ, ಪ್ರಗತಿಯ ನಿಯಮಿತ ಪರಿಶೀಲನೆಗೆ ಒತ್ತು ನೀಡಬೇಕು ಎಂದರು.**

<><><>

**ನ್ಯಾಯಯುತ ಮತ್ತು ಭರವಸೆಯ ಜಗತ್ತಿನಲ್ಲಿ, ಯುವಜನರು ಬಯಸುವ ಕುಟುಂಬಗಳನ್ನು ರಚಿಸಲು, ಅವರನ್ನು ಸಬಲೀಕರಣಗೊಳಿಸುವುದು ಎಂಬ ಧ್ಯೇಯದಡಿ, ಇಂದು ವಿಶ್ವ ಜನಸಂಖ್ಯಾ ದಿನಾಚರಣೆ. ಧಾರವಾಡದ, ಸರ್ಕಾರಿ ಪದವಿ ಪೂರ್ವ ಕಾಲೇಜು ಸಭಾಂಗಣದಲ್ಲಿ ಜನಸಂಖ್ಯಾ ದಿನದ ಹಿನ್ನೆಲೆ ನೆಹರೂ ಯುವಕೇಂದ್ರ ಹಾಗೂ ಎಫ್.ಪಿ.ಎ.ಐ ಸಹಯೋಗದಲ್ಲಿ, ಜಾಗತಿಕ ಜನಸಂಖ್ಯಾ ಸಮಸ್ಯೆಗಳ ಕುರಿತು, ಜಾಗೃತಿ ಮೂಡಿಸುವ ಕಾರ್ಯಕ್ರಮ ಆಯೋಜಿತವಾಗಿದೆ. 'ವಿಶ್ವ ಜನಸಂಖ್ಯಾ ದಿನಾಚರಣೆ' ಹಿನ್ನೆಲೆ ಹಾಗೂ ಮಹತ್ವದ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಧಾರವಾಡ, ಫ್ಯಾಮಿಲಿ ಪ್ಲಾನಿಂಗ್ ಅಸೋಶಿಯೇಶನ್ ಆಫ್ ಇಂಡಿಯಾದ, ಕಾರ್ಯಕ್ರಮ ಅಧಿಕಾರಿ ನಿಂಗಪ್ಪ ಮಡಿವಾಳರ**

<><><>

**ಧ್ವನಿ: ನಿಂಗಪ್ಪ ಮಡಿವಾಳರ 38 ಸೆಕೆಂದುಗಳು**

<><><>

**ಹೃದಯ ಸಂಬಂಧಿ ಖಾಯಿಲೆಗಳ ಬಗ್ಗೆ ಜನರಲ್ಲಿ ಆತಂಕ ಹೆಚ್ಚಾಗಿದೆ, ಈ ನಿಟ್ಟಿನಲ್ಲಿ ಹಾಸನ ಜಿಲ್ಲೆಯಾದ್ಯಂತ ವಿವಿಧ ಜಾಗ್ರತಿ ಕಾರ್ಯಕ್ರಮಗಳ ಮೂಲಕ, ಧೈರ್ಯ ತುಂಬುವ ಕೆಲಸ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಕೆ.ಎಸ್ ಲತಾಕುಮಾರಿ ಹೇಳಿದ್ದಾರೆ. ಇಂದು ಬೆಳಗ್ಗೆ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಆಯೋಜಿತ, ಕಾಲ್ನಡಿಗೆ ಜಾಥಾ–**

ವಾಕಥಾನ್ ಗೆ ಚಾಲನೆ ನೀಡಿ ಅವರು ಮಾತನಾಡಿದರು.  ಹೃದಯ ಸಂಬಂಧಿ ಕಾಯಿಲೆಗಳ ಬಗ್ಗೆ ಭಯ ಬೇಡ, ಆದರೆ ಎಚ್ಚರ ಅಗತ್ಯ.  ಪ್ರತಿಯೊಬ್ಬರು ಆರೋಗ್ಯಕರ ಜೀವನ ಪದ್ಧತಿ ರೂಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

<><><>

ರಾಜ್ಯ ವಿಧಾನಪರಿ ‘ತ್ತಿನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದ, ಹಿರಿಯ ಕಾನೂನು ತಜ್ಞ ಹಾಗೂ ನೇತಾರ ಎನ್. ತಿಪ್ಪಣ್ಣ ಅವರು, ಇಂದು ಬೆಳಗ್ಗೆ ಬಳ್ಳಾರಿಯಲ್ಲಿ ನಿಧನರಾದರು, ಅವರಿಗೆ 97 ವರ್ಷ ವಯಸ್ಸಾಗಿತ್ತು.  ಬಳ್ಳಾರಿಯ ಅವರ ಸ್ವಗೃಹದಲ್ಲಿ ಇಂದು ಅಂತಿಮ ದರ್ಶನದ ವ್ಯವಸ್ಥೆ ಮಾಡಲಾಗಿದ್ದು, ನಾಳೆ ಮಧ್ಯಾಹ್ನ ಹುಟ್ಟೂರು ಚಿತ್ರದುರ್ಗ ಜಿಲ್ಲೆ, ತುರವನೂರು ಗ್ರಾಮದಲ್ಲಿ ಅಂತ್ಯ ಸಂಸ್ಕಾರ ನಡೆಯಲಿದೆ. ಅಖಿಲ ಭಾರತ ವೀರಶೈವ ಮಹಾಸಭಾದ, ರಾಜ್ಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದ ಎನ್.ತಿಪ್ಪಣ್ಣ ಅವರ ನಿಧನಕ್ಕೆ ಗಣ್ಯರು ಕಂಬನಿ ಮಿಡಿದಿದ್ದು, ಸಂತಾಪ ಸೂಚಿಸಿದ್ದಾರೆ.

<><><>

ಸಾರ್ವಜನಿಕ ಸ್ಥಳಗಳಲ್ಲಿ ಮಹಿಳೆಯರ ವಿಡಿಯೋ ಚಿತ್ರೀಕರಣ, ಬಳಿಕ ಜಾಲತಾಣಗಳಲ್ಲಿ ಹಂಚಿಕೊಂಡು, ಮಹಿಳೆಯರ ಗೌರವಕ್ಕೆ ಧಕ್ಕೆಯುಂಟು ಮಾಡುವವರ ವಿರುದ್ಧ ತೀವ್ರ ನಿಗಾ ವಹಿಸಲಾಗಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮಹಿಳೆಯರ ಘನತೆಗೆ ಚ್ಯುತಿಯುಂಟು ಮಾಡುವ, ವಿಡಿಯೋಗಳು ಅಥವಾ ಖಾತೆಗಳು ಕಂಡಲ್ಲಿ, ತಕ್ಷಣವೇ ಸೈಬರ್ ಘಟಕದ ಸಹಾಯವಾಣಿ, 1930 ಗೆ ಕರೆಮಾಡಿ ಅಥವಾ ಜಾಲತಾಣ cybercrime.gov.in ನಲ್ಲಿ ದೂರು ದಾಖಲಿಸುವಂತೆ, ಸಿದ್ದರಾಮಯ್ಯ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಕೋರಿದ್ದಾರೆ.

<><><>

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬಳ್ಳಾರಿ ವತಿಯಿಂದ, ವಿಜಯನಗರ ಜಿಲ್ಲೆಯಲ್ಲಿ, ನಾಳೆ ರಾಷ್ಟ್ರೀಯ ಲೋಕ್ ಅದಾಲತ್  ಆಯೋಜಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ರಾಜೇಶ್.ಎನ್.ಹೊಸಮನೆ ತಿಳಿಸಿದ್ದಾರೆ.

<><><>

ದಾವಣಗೆರೆ ಜಿಲ್ಲೆಯ 24 ಕ್ಕೂ ಹೆಚ್ಚು ನ್ಯಾಯಾಲಯಗಳಲ್ಲಿ, ನಾಳೆ ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸುವ ಮೂಲಕ, 10 ಸಾವಿರ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ ಎಂದು, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಡಿ.ಕೆ ವೇಲಾ ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>